ಕರ್ನಾಟಕ ಸರ್ಕಾರ
**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/44/ಸ್ವಾ.ಅ.ಮ/2022-23 ದಿನಾಂಕ: 11.08.2022

## ಸುತ್ತೋಲೆ

ವಿಷಯ: ಸ್ವಾತಂತ್ರ್ಯದ ಅಮೃತ ಮಹೋತ್ಸವದ ಹಿನ್ನೆಲೆಯಲ್ಲಿ "ಹರ್ ಘರ್ ತಿರಂಗಾ" ಅಭಿಯಾನ ಕಾರ್ಯಕ್ರಮದ ಅನುಷ್ಠಾನ ಕುರಿತು.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: ಡಿಕೆಸಿ/40025/28/2022 (ಭಾಗ-5) ಬೆಂಗಳೂರು, ದಿನಾಂಕ:10.08.2022.

* * * * * *

ಅವಿರತ ಹೋರಾಟ, ತ್ಯಾಗ, ಬಲಿದಾನಗಳ ಕಾರಣದಿಂದ ದಾಸ್ಯದ ಸಂಕೋಲೆಯಿಂದ ಬಿಡುಗಡೆಯಾದ ಭಾರತ ದೇಶಕ್ಕೆ ಪ್ರಾಪ್ತವಾದ ಸ್ವಾತಂತ್ರ್ಯಕ್ಕೆ ಈಗ ಅಮೃತ ಮಹೋತ್ಸವದ ಸಂಭ್ರಮ. **'ಇತಿಹಾಸ ಮರೆತವರು ಇತಿಹಾಸ ಸೃಷ್ಟಿಸಲಾರರು'** ಎಂಬ ನಾಣ್ಣುಡಿಯಂತೆ ಇಂದಿನ ನಮ್ಮ ಸಂಭ್ರಮಕ್ಕೆ ತಳಪಾಯವಾಗಿ, ಮೆಟ್ಟಿಲುಗಳಾಗಿ ತಮ್ಮ ಜೀವ-ಜೀವನ ತ್ಯಾಗ ಮಾಡಿದ ಎಲ್ಲರನ್ನು ಗೌರವಿಸುತ್ತಾ, ಸದಾ ಸ್ಮರಿಸುತ್ತಾ ಭವ್ಯ ಭಾರತವನ್ನು ಕಟ್ಟುವಲ್ಲಿ ನಮ್ಮ ಜವಬ್ದಾರಿಯುತ ಪಾತ್ರವನ್ನು ನಿರ್ವಹಿಸಬೇಕಿದೆ.

ದೇಶಾದ್ಯಂತ ಭಾರತ ಸ್ವಾತಂತ್ರ್ಯದ 75ರ ಸಂಭ್ರಮವನ್ನು ವೈವಿಧ್ಯಮಯವಾಗಿ ಆಚರಿಸಲಾಗುತ್ತಿದೆ. ಈ ಸಂಭ್ರಮದ ಒಂದು ಭಾಗವಾಗಿ ಕೇಂದ್ರ ಸರ್ಕಾರವು **ಹರ್ ಘರ್ ತಿರಂಗಾ** ಎಂಬ ಘೋಷವಾಕ್ಯದೊಂದಿಗೆ 2022ರ ಆಗಸ್ಟ್ 13 ರಿಂದ 15 ಆಗಸ್ಟ್ ರವರೆಗೆ ಅಭಿಯಾನವನ್ನು ಹಮ್ಮಿಕೊಂಡಿದೆ.

1. ಸದರಿ ಅಭಿಯಾನದಲ್ಲಿ ರಾಜ್ಯದ ಸರ್ಕಾರಿ / ಅರೆ ಸರ್ಕಾರಿ / ನಿಗಮ ಮಂಡಳಿಗಳು / ಸಾರ್ವಜನಿಕ ಉದ್ಯಮಿಗಳು/ಸ್ವ ಸಹಾಯ ಗುಂಪುಗಳು /ನಾಗರೀಕ ಸಂಸ್ಥೆಗಳು/ಸಾರ್ವಜನಿಕರು / ಕಾಲೇಜು ವಿದ್ಯಾರ್ಥಿಗಳು ಇತರೆ ಎಲ್ಲಾ ಸಿಬ್ಬಂದಿಗಳು ಹಾಗೂ ಅವರ ಕುಟುಂಬ ವರ್ಗದವರೂ ಒಳಗೊಂಡಂತೆ ಸ್ವತ: ತಾವೇ ಕ್ರಿಯಾಶೀಲವಾಗಿ ಭಾಗವಹಿಸುವಂತೆ ಹಾಗೂ ಅವರುಗಳ ಮನೆ / ಕಛೇರಿಗಳ ಮೇಲೆ ಧ್ವಜಾರೋಹಣ ಮಾಡಲು ಪ್ರೇರೇಪಿಸುವುದು.
2. "ಹರ್ ಘರ್ ತಿರಂಗಾ" ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಸ್ಥಳೀಯ ಭಾಷೆಯಲ್ಲಿ ಕರಪತ್ರ, ಸ್ಟಾಂಡೀಸ್, ಬ್ಯಾನರ್ ಇತ್ಯಾದಿಗಳನ್ನು ಪ್ರಮುಖ ಸ್ಥಳಗಳಲ್ಲಿ ಪ್ರದರ್ಶಿಸುವುದು.
3. ರಾಜ್ಯ ಸರ್ಕಾರದ ಜಾಲತಾಣಗಳ ಹಾಗೂ ಸಾಮಾಜಿಕ ಮಾಧ್ಯಮಗಳ ಅಂಗಗಳನ್ನು ಉಪಯೋಗಿಸಿಕೊಳ್ಳುವುದು. ಬಸ್ ಸ್ಟ್ಯಾಂಡ್, ರೈಲ್ವೆ ನಿಲ್ದಾಣ, ಉದ್ಯಾನವನಗಳು, ಅಲ್ಲದೇ ಪ್ರತಿ ವಾರ್ಡ್‌ಗಳಲ್ಲಿ ಸಾರ್ವಜನಿಕ ಸಂಪರ್ಕ ಹೊಂದಿರುವ ಕಛೇರಿಗಳಲ್ಲಿ "ಹರ್ ಘರ್ ತಿರಂಗಾ" ಕುರಿತಂತೆ ಪ್ರಚಾರ ಮಾಡಲು ಸೂಕ್ತ ಕ್ರಮ ವಹಿಸುವುದು.
4. ಕೇಂದ್ರ ಸರ್ಕಾರದ ಜಾಲ ತಾಣದಲ್ಲಿ (amritmahotsav.nic.in) "ಹರ್ ಘರ್ ತಿರಂಗಾ" ದ ಅಡಿಯಲ್ಲಿ ರಾಷ್ಟ್ರಧ್ವಜಕ್ಕೆ ಸಂಬಂಧಿಸಿದಂತೆ ಬ್ಯಾನರ್ ಮತ್ತು

ಪೋಸ್ಟರ್‌ಗಳ ಮಾದರಿಗಳು ಲಭ್ಯವಿದ್ದು, ಅವುಗಳ ಉಪಯೋಗಗಳನ್ನು ಪಡೆದುಕೊಳ್ಳುವುದು.

ರಾಜ್ಯದ ಎಲ್ಲಾ ಕಾಲೇಜು ಹಾಗೂ ಕಛೇರಿಗಳಲ್ಲಿ ದಿನಾಂಕ:13 ರಿಂದ 15 ನೇ ಆಗಸ್ಟ್ ರವರೆಗೆ "ಹರ್ ಘರ್ ತಿರಂಗಾ" ಅಭಿಯಾನದಲ್ಲಿ ಎಲ್ಲರ ಭಾಗವಹಿಸುವಿಕೆ ಮತ್ತು ಮೇಲ್ವಿಚಾರಣೆಗೆ ಸಂಬಂಧಿಸಿದಂತೆ ನೋಡಲ್ ಅಧಿಕಾರಿಗಳು, ಸಮನ್ವಯಾಧಿಕಾರಿಗಳು ಕಾರ್ಯತಂತ್ರವನ್ನು ರೂಪಿಸಿಕೊಂಡು ರಾಷ್ಟ್ರಧ್ವಜವನ್ನು ಹಾರಿಸುವ ಅಭಿಯಾನವನ್ನು ಯಶಸ್ವಿಗೊಳಿಸುವಂತೆ ಸೂಚಿಸಲಾಗಿರುತ್ತದೆ.

11.08.2022

ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

ಇವರಿಗೆ:

1) ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
3) ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳು, ಬೋಧಕ / ಬೋಧಕೇತರ ವರ್ಗದ ಸಿಬ್ಬಂದಿಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4) ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಧ್ಯಕ್ಷರು, ಆಜಾದಿ ಕಾ ಅಮೃತ್ ಮಹೋತ್ಸವ್ ಸಮಿತಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.
2) ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರ ಆಪ್ತಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು-01.
3) ಕಛೇರಿ ಪ್ರತಿ.